ಚಿಕ್ಕಬಳ್ಳಾಪುರ ನಗರದ ಹೊರವರ್ತುಲ ರಸ್ತೆ

274(556) ಶ್ರೀ ಬಚ್ಚೇಗೌಡ ಕೆ ಪಿ:(ಚಿಕ್ಕಬಳ್ಳಾಪುರ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದು ಹಾಗೂ ವಾಹನ ದಟ್ಟಣೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ವಾಹನ ದಟ್ಟಣೆಯನ್ನು ನಿಯಂತ್ರಿಸಲು ಹೊರ ವರ್ತುಲ ರಸ್ತೆಯನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಹೊರ ವರ್ತುಲ ರಸ್ತೆಯ ನಿರ್ಮಾಣಕ್ಕೆ ಭೂ ಸಾಧೀನಪಡಿಸಿಕೊಳ್ಳಲಾಗಿದೆಯೇ;

ಈ) ಈ ಕಾರ್ಯಕ್ಕಾಗಿ ಅಂದಾಜು ಪಟ್ಟಿಯನ್ನು ತಯಾರಿಸಿ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆಯನ್ನು ಪಡೆಯಲಾಗಿದೆಯೇ;

ಉ) ಹಾಗಿದ್ದಲ್ಲಿ, ಈ ಹೊರ ವರ್ತುಲ ರಸ್ತೆಯ ನಿರ್ಮಾಣಕ್ಕೆ ಸರ್ಕಾರ ನಿಗದಿಪಡಿಸಿರುವ ಅನುದಾನ ಮೊತ್ತವೆಷ್ಟು;

ಊ) ಈ ಹೊರ ವರ್ತುಲ ರಸ್ತೆಯ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು. (ವಿವರ ನೀಡುವುದು)?

ಶ್ರೀ ಸಿ ಎಂ ಉದಾಸಿ(ಲೋಕೋಪಯೋಗಿ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ವಾಹನ ದಟ್ಟಣೆ ನಿಯಂತ್ರಣಕ್ಕಾಗಿ ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್.ಹೆಚ್.ಎ.ಐ) ವತಿಯಿಂದ ಬೈಪಾಸ್ ರಸ್ತೆಯನ್ನು ನಿರ್ಮಿಸಲಾಗಿರುತ್ತದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ

ಊ) ಉದ್ಭವಿಸುವುದಿಲ್ಲ.

XXX